ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಹೆಚ್ಚುವರಿ ಪ್ರಮಾಣ ಪತ್ರವನ್ನು ನನ್ನ ಮುಂದುವರೆದ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಹೆಚ್ಚುವರಿ ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ದಿನಾಂಕ 25.11.2009 ರಂದು ಆದ ನೋಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-23 ಎಂದು, ದಿನಾಂಕ 20.10.2008 ರಂದು ಆದ ನೋಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-24 ಎಂದು, ಆಸ್ತಿ ತೆರಿಗೆ ಬೇಡಿಕೆಯ ದಾಖಲೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-25 ಎಂದು, ಒಂದು ಡಿಮ್ಯಾಂಡ್ ರಿಜಿಸ್ಟರ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-26 ಎಂದು, ವಾದಿಗೆ ಸೇರಿದ ಎಸ್.ಬಿ.ಐ. ಬ್ಯಾಂಕ್ ಖಾತೆಯ ಲೆಕ್ಕ ತಃಖ್ತೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-27 ಎಂದು, ದಿನಾಂಕ 24.11.2009 ರಂದು ಆದ ನೋಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-28 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-

1 ನೇ ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದು ಸಮಯ ಕೋರಿದ್ದಾರೆ ಆದರೆ ಲಿಖಿತ ಹೇಳಿಕೆ ಸಲ್ಲಿಸದ ಕಾರಣ ಪಾಟೀ ಸವಾಲು

ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.